16

ಇಲಾಖೆ / ವಿಷಯ : DEPARTMENT / SUBJECT:


ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಕಸ್ತೂರಿ ರಂಗನ್ ವರದಿ ತಿರಸ್ಕಾರ

29/12/20

## ಸಂಪುಟ ಉಪಸಮಿತಿ ಸಭೆಯಲ್ಲಿ ನಿರ್ಧಾರ

**ಬೆಂಗಳೂರು:** ಪಶ್ಚಿಮ ಘಟ್ಟಗಳ ಸಂರಕ್ಷಣೆ ಸಂಬಂಧ ಡಾ.ಕೆ.ಕಸ್ತೂರಿರಂಗನ್ ಸಮಿತಿ ಸಲ್ಲಿಸಿರುವ ವರದಿ ಅವೈಜ್ಞಾನಿಕವಾಗಿದ್ದು, ಇದು ಜಾರಿಯಾದರೆ ಗಂಡಾಂತರ ಎದುರಾಗಲಿದೆ ಎಂದು ಆತಂಕ ವ್ಯಕ್ತಪಡಿಸಿರುವ ರಾಜ್ಯ ಸರ್ಕಾರ ವರದಿಯನ್ನು ಸಾರಾಸಗಟಾಗಿ ತಿರಸ್ಕರಿಸಿದೆ. ಈ ಬಗ್ಗೆ ಸದ್ಯದಲ್ಲೇ ಕೇಂದ್ರ ಸರ್ಕಾರಕ್ಕೆ ಲಿಖಿತ ಅಭಿಪ್ರಾಯ ಸಲ್ಲಿಸಲು ಮುಂದಾಗಿದೆ.



- **ವರದಿ ಜಾರಿಯಾದರೆ ಗಂಡಾಂತರ ಸೃಷ್ಟಿ**
- **ಕೇಂದ್ರ ಸರ್ಕಾರಕ್ಕೆ ಲಿಖಿತ ಅಭಿಪ್ರಾಯ ಸಲ್ಲಿಕೆಗೆ ತೀರ್ಮಾನ**

ಅರಣ್ಯ ಸಚಿವ ಆನಂದ್ ಸಿಂಗ್ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸಂಪುಟ ಉಪಸಮಿತಿ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಒಂದೊಮ್ಮೆ ರಾಷ್ಟ್ರೀಯ ಹಸಿರು ಪೀಠ ರಾಜ್ಯ ಸರ್ಕಾರದ ನಿಲುವಿಗೆ ವ್ಯತಿರಿಕ್ತ ಆದೇಶ ನೀಡಿದರೆ ಅದನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ನಿರ್ಧರಿಸಲಾಗಿದೆ.

ಸಭೆಯ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಚಿವ ಆರ್.ಅಶೋಕ್, ಡಾ.ಕಸ್ತೂರಿರಂಗನ್ ವರದಿ ಅವೈಜ್ಞಾನಿಕವಾಗಿದ್ದು ಜಾರಿಗೊಳಿಸಲು ಕಾರ್ಯಸಾಧುವೆನಿಸಿಲ್ಲ. ವರದಿ ಜಾರಿಯಾದರೆ ಸಾಕಷ್ಟು ಸಮಸ್ಯೆ ಸೃಷ್ಟಿಯಾಗಲಿದ್ದು, ದೊಡ್ಡ ಗಂಡಾಂತರ ಎದುರಾಗಲಿದೆ. ಅವೈಜ್ಞಾನಿಕ ವರದಿಯನ್ನು ಸರ್ಕಾರ ಜನರ ಮೇಲೆ ಹೇರುವುದಿಲ್ಲ. ಹಾಗಾಗಿ ವರದಿಯನ್ನು ತಿರಸ್ಕರಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಡಾ.ಕೆ.ಕಸ್ತೂರಿ ರಂಗನ್ ವರದಿಗೆ ಒಪ್ಪಿಗೆ ಇಲ್ಲ ಎಂಬುದಾಗಿ ರಾಷ್ಟ್ರೀಯ ಹಸಿರು ಪೀಠಕ್ಕೆ ಅಭಿಪ್ರಾಯ ತಿಳಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗುವುದು. ಡಿ. 31ರೊಳಗೆ ಎನ್‌ಜಿಟಿಯಲ್ಲಿ ವಿಚಾರಣೆಗೆ ಬರಲಿದ್ದು ಕೇಂದ್ರ ಸರ್ಕಾರ ಪ್ರಮಾಣ ಪತ್ರ ಸಲ್ಲಿಸಬೇಕಿದೆ. ಆ ಹಿನ್ನೆಲೆಯಲ್ಲಿ ಸಂಪುಟ ಉಪಸಮಿತಿ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ ವರದಿಯನ್ನು ತಿರಸ್ಕರಿಸಲು ನಿರ್ಧಾರ ಕೈಗೊಳ್ಳಲಾಗಿದೆ. ಈ ನಿಲುವನ್ನು ಮುಖ್ಯಮಂತ್ರಿಗಳ ಮುಖೇನ ಒಂದೆರಡು ದಿನದಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಜೀವಶಾಸ್ತ್ರ ಸಚಿವರಿಗೆ ತಿಳಿಸಲಾಗುವುದು ಎಂದು ತಿಳಿಸಿದರು.

ವರದಿ ಸಿದ್ಧಪಡಿಸುವ ಸಂದರ್ಭದಲ್ಲೇ ಹಲವು ನ್ಯೂನತೆಗಳಾಗಿವೆ. ಗ್ರಾಮ ಪಂಚಾಯ್ತಿಯಿಂದ ವಿಧಾನಸಭಾ ಕ್ಷೇತ್ರದ ವರೆಗೆ ಎಲ್ಲ ಹಂತಗಳಲ್ಲೂ ವರದಿಗೆ ವಿರೋಧವಿದೆ. ವರದಿಯನ್ನು ಒಪ್ಪಿದರೆ ಜನರ ಹೋರಾಟಕ್ಕೆ ನಾಂದಿ ಹಾಡಿದಂತಾಗಲಿದೆ ಎಂದು ಹೇಳಿದರು.

ಪಶ್ಚಿಮಘಟ್ಟ ಸಂರಕ್ಷಣೆ ಸಂಬಂಧ ರಾಜ್ಯ ಸರ್ಕಾರ ನೆರೆಯ ಕೇರಳ ರಾಜ್ಯಕ್ಕಿಂತ ಒಂದು ಹೆಜ್ಜೆ ಮುಂದೆ ಇಟ್ಟಿದೆ. ಕೇರಳಕ್ಕಿಂತಲೂ ಹೆಚ್ಚು ಪರಿಣಾಮಕಾರಿಯಾಗಿ ರಾಜ್ಯದಲ್ಲಿ ಕ್ರಮ ಕೈಗೊಳ್ಳಲು ಅಧಿಕಾರಿಗಳು ಈಗಾಗಲೇ ವರದಿ ಸಿದ್ಧಪಡಿಸಿದ್ದಾರೆ ಎಂದು ತಿಳಿಸಿದರು.

> **ಪಶ್ಚಿಮಘಟ್ಟ ಶ್ರೇಣಿಯು ಕರ್ನಾಟಕ ಸೇರಿದಂತೆ ಆರು ರಾಜ್ಯಗಳಲ್ಲಿ ವ್ಯಾಪಿಸಿದೆ. ಕರ್ನಾಟಕದಲ್ಲಿ ವಿಸ್ತಾರ ಪ್ರದೇಶವಿದೆ. ಯಾವ ರಾಜ್ಯಗಳೂ ಡಾ.ಕೆ.ಕಸ್ತೂರಿರಂಗನ್ ವರದಿಯನ್ನು ಒಪ್ಪುತ್ತಿಲ್ಲ. ರಾಜ್ಯ ಸರ್ಕಾರ ಕೂಡ ವರದಿ ಒಪ್ಪದಿರಲು ತೀರ್ಮಾನಿಸಿದೆ.**
>
> **• ಆನಂದ್ ಸಿಂಗ್, ಅರಣ್ಯ ಸಚಿವ**